**ಕರ್ನಾಟಕ ಸರ್ಕಾರ**
**(ಸಿ.ಆರ್.ಪಿ.67)**

| |
|---|
| **ಹೇಳಿಕೆ ಹಾಳೆ** |
| **(ಆರ್.ಪಿ.ಸಂಖ್ಯೆ 57)** |
| **ನಮೂನೆ ಸಂಖ್ಯೆ 4** |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸೆಷನ್ಸ್ ಕೇಸ್ ನಂಬರ್ : 250/2022**

**ಫ್ರಾಸಾ- 9 ಚಾಸಾ- 13**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಶಂಕರ |
| ತಂದೆಯ ಹೆಸರುಃ | : | ದೇವೇಗೌಡ |
| ವಯಸ್ಸುಃ | : | 49 ವರ್ಷ |
| ಉದ್ಯೋಗಃ | : | ಖಾಸಗಿ ವ್ಯಾಪಾರ |
| ವಾಸ | : | ಅಗಿಲೆ ಗ್ರಾಮ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:09-02-2026:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ಈಗ ತೋರಿಸಿದ ದಾಖಲೆಯಲ್ಲಿರುವ ರುಜು ನನ್ನದೆ. ಅದನ್ನು ನಿಪಿ-9 ಎಂದುಕ ಸಾಕ್ಷಿಯ ರುಜುವನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. 3 ವರೆ ವರ್ಷಗಳ ಹಾಸನ ನಗರ ಪಿ ಎಸ್ ನಲ್ಲಿ ಹಾಕಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ ಆ ಸಮಯದಲ್ಲಿ ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ವಶಪಡಿಸಿಕೊಂಡಿಲ್ಲ. ನನಗೆ ಆರೋಪಿತರ ಪರಿಚಯವಿಲ್ಲ. ನಾನು ಸಹಿ ಹಾಕುವ ಸಮಯದಲ್ಲಿ ಆರೋಪಿತರು ಇರಲಿಲ್ಲ. (ಮಾನ್ಯ ಅಭಿಯೋಜಕರು ನ್ಯಾಯಾಲಯದ ಮುಂದೆ ಇರುವ ಬಟ್ಟೆಯಿಂದ ಪ್ಯಾಕು ಮಾಡಿರುವ ಪ್ಯಾಕೇಟನ್ನು ಒಡೆಯಲು ಅನುಮತಿ ಕೋರಿದ್ದು, ಅನುಮತಿ ನೀಡಿದೆ) ಬಟ್ಟೆಯಿಂದ ಪ್ಯಾಕು ಮಾಡಿದ ಪ್ಯಾಕ್ನನ್ನು ತೆರೆದು ತೋರಿಸಿದಾಗ ಅದರೊಳಗಿರುವ ಒಂದು ಟೀಶರ್ಟನ್ನು ನೋಡಿ ಅದನ್ನು ತಾನು ಈ ಹಿಂದೆ ನೋಡಿಲ್ಲ, ತನ್ನ ಸಮಕ್ಷಮ ವಶಪಡಿಸಿಕೊಂಡಿಲ್ಲ ಎನ್ನುತ್ತಾರೆ. ಗುರುತಿಸುವಿಕೆಗಾಗಿ ಎಂ.ಒ.4 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ

ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ**

ಆ ದಿವಸ ಪೊಲೀಸ್ ಠಾಣೆಯಲ್ಲಿ ನಾನು ಸಹಿ ಹಾಕುವ ಸಮಯದಲ್ಲಿ ನ್ಯಾಯಾಲಯದ ಮುಂದಿರುವ ಆರೋಪಿತರು ಇದ್ದರು ಎಂದರೆ ಸರಿಯಲ್ಲ. ಆರೋಪಿ ತಾನು ಕೃತ್ಯದ ಸಮಯದಲ್ಲಿ ಧರಿಸಿದ್ದ ಬಟ್ಟೆ ಎಂದುಕ ಈಗ ನನಗೆ ತೋರಿಸಿದ ಎಂ.ಒ-4 ಟೀಶರ್ಟನ್ನು ಹಾಜರುಪಡಿಸಿದರು ಎಂದರೆ ಸರಿಯಲ್ಲ. ಅದನ್ನು ಪೊಲೀಸರು ವಶಪಡಿಸಿಕೊಂಡು ನನ್ನ ಸಮಕ್ಷಮ ನಿಪಿ-9 ರಂತೆ ಮಹಜರು ಬರೆದರು, ಅದಕ್ಕೆ ನಾನು ಸಹಿ ಹಾಕಿದ್ದು ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ಎಂಒ 4 ನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ ಬಿ ವಿ ವಕೀಲರಿಂದಃ**

ಇಲ್ಲವೆಂದು ಹೇಳುತ್ತಾರೆ..

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**